# ಕರ್ನಾಟಕ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 467(510)
2. ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 19.02.2024
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಕ್ಯಾನ್ಸರ್ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಈಗಾಗಲೇ ಒಟ್ಟು 7 ಸರ್ಕಾರಿ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ಕಾಯಿಲೆಗೆ ಚಿಕಿತ್ಸೆ ದೊರಕುತ್ತಿದ್ದು, ಆಸ್ಪತ್ರೆಯ ಹೆಸರು ಹಾಗೂ ಜಿಲ್ಲೆಗಳ (ಜಿಲ್ಲಾ ಕೇಂದ್ರಗಳಲ್ಲಿ ಇರುವ ಆಸ್ಪತ್ರೆಗಳು) ವಿವರ ಈ ಕೆಳಕಂಡಂತಿದೆ.<br><br>1) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು<br>2) ಪೆರಿಫೆರಲ್ ಕ್ಯಾನ್ಸರ್ ಕೇಂದ್ರ, ಕಲಬುರಗಿ<br>3) ಕೃಷ್ಣರಾಜೇಂದ್ರ ಆಸ್ಪತ್ರೆ, ಮೈಸೂರು<br>4) ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ, ಧಾರವಾಡ ಜಿಲ್ಲೆ<br>5) ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ<br>6) ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ<br>7) ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ |
| (ಆ) | ಇತ್ತೀಚೆಗೆ ಕ್ಯಾನ್ಸರ್ ಖಾಯಿಲೆಯಿಂದ ಸಾವುಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಪ್ರಾಥಮಿಕ ಹಂತದ ಕ್ಯಾನ್ಸರ್ ಕಾಯಿಲೆ ತಡೆಗಟ್ಟಲು (Primary Prevention) ಅಂದರೆ, ಕ್ಯಾನ್ಸರ್ ಅರಿವು ಮೂಡಿಸಲು ಬೀದಿನಾಟಕ, ವಿಡಿಯೋ ಪ್ರದರ್ಶನ, ಜನಜಾಗೃತಿ ಜಾಥಾ ಹಾಗೂ ರಾಜ್ಯದ ವಿವಿಧ ಶಾಲಾ ಕಾಲೇಜುಗಳಲ್ಲಿ ಕ್ಯಾನ್ಸರ್ ಕುರಿತು ಸಂವಾದ, ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಲ್ಲಿ, ಅಲ್ಲದೆ, ಸ್ತ್ರೀಶಕ್ತಿ ಸಂಘಗಳಲ್ಲಿ, ಅಂಗನವಾಡಿ ಹಾಗೂ ಆಶಾಕಾರ್ಯಕರ್ತೆಯರಿಗೆ ಕ್ಯಾನ್ಸರ್ ಕುರಿತು ಕೈಗೊಳ್ಳಬೇಕಾದ ಮುಂಜಾಗ್ರತ ಕ್ರಮಗಳನ್ನು ಹಾಗೂ ಕ್ಯಾನ್ಸರ್ ರೋಗಲಕ್ಷಣಗಳ ಕುರಿತು ಉಪನ್ಯಾಸಗಳನ್ನು ನಿಯಮಿತವಾಗಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ನಡೆಸಿಕೊಂಡು ಬರುತ್ತಿದೆ.<br><br>ದ್ವಿತೀಯ ಹಂತದ ಕ್ಯಾನ್ಸರ್ ಕಾಯಿಲೆ ತಡೆಗಟ್ಟಲು, ಅಂದರೆ, ಕಾಯಿಲೆಯನ್ನುಮೊದಲ ಹಂತದಲ್ಲಿಯೇ ಪತ್ತೆ ಹಚ್ಚಲು ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಿಂದ ರಾಜ್ಯದ ವಿವಿಧ ಸ್ಥಳಗಳಲ್ಲಿ |

| | | |
|---|---|---|
| | | ಸಂಚಾರಿ ಕ್ಯಾನ್ಸರ್ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. 2022-2024 ರಲ್ಲಿ ಇಂತಹ 143 ಶಿಬಿರಗಳನ್ನು ನಡೆಸಲಾಗಿದೆ. ಶಿಬಿರಗಳಲ್ಲಿ ಕ್ಯಾನ್ಸರ್ ರೋಗಲಕ್ಷಣಗಳು ಕಂಡುಬಂದ ಪ್ರಕರಣಗಳನ್ನು ಹೆಚ್ಚಿನ ತಪಾಸಣೆಗಾಗಿ ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಗೆ ಬರುವಂತೆ ಸೂಚನೆ ನೀಡಲಾಗುತ್ತದೆ.<br><br>ಕ್ಯಾನ್ಸರ್ ರೋಗದ ಚಿಕಿತ್ಸೆಗಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರಗಳನ್ನು (ಪಿ.ಸಿ.ಸಿ) ಹೊಸದಾಗಿ ಪ್ರಾರಂಭಿಸಲು ಸರ್ಕಾರವು ನಿರ್ಧರಿಸಿದ್ದು, ಅದರಂತೆ<br>a) ಮೈಸೂರಿನಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರದ ಕಟ್ಟಡದ ನಿರ್ಮಾಣ ಕಾಮಗಾರಿಯು ಪ್ರಾರಂಭಗೊಂಡಿರುತ್ತದೆ.<br>b) ತುಮಕೂರು ಜಿಲ್ಲೆಯಲ್ಲಿ ಪಿಸಿಸಿ ಕೇಂದ್ರದ ಕಟ್ಟಡ ನಿರ್ಮಾಣ ಕಾರ್ಯವು ಪ್ರಗತಿಯ ಹಂತದಲ್ಲಿದೆ.<br>c) ಶಿವಮೊಗ್ಗ ಜಿಲ್ಲೆಯಲ್ಲಿಯೂ ಸಹ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br>d) ಬೆಳಗಾವಿ ಜಿಲ್ಲೆಯಲ್ಲಿ ಪಿಸಿಸಿ ಕೇಂದ್ರ ಸ್ಥಾಪನೆಗೆ ಸ್ಥಳ ನಿಗದಿಪಡಿಸಲಾಗಿದೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಯಲ್ಲಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರದ ಸ್ಥಾಪನೆಯು ಪ್ರಗತಿಯ ಹಂತದಲ್ಲಿದೆ.<br><br>ಕಾರವಾರದಲ್ಲಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರದ ಸ್ಥಾಪನೆಯು ಪ್ರಗತಿಯ ಹಂತದಲ್ಲಿದೆ. |
| (ಇ) | ಸರ್ಕಾರವು ರಾಜ್ಯದ್ಯಂತ ಹೆಚ್.ಐ.ವಿ ಕುಷ್ಟರೋಗಗಳಂತಹ ರೋಗಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಯಶಸ್ವಿಯಾಗಿದ್ದು, ಕ್ಯಾನ್ಸರ್ ಕಾಯಿಲೆಯ ಬಗ್ಗೆ ಅರಿವು ಮೂಡಿಸುವಲ್ಲಿ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅರಿವು ಮೂಡಿಸುವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ವಿಳಂಬವಾಗಲು ಕಾರಣವೇನು; | ಬಂದಿರುವುದಿಲ್ಲ. |
| (ಈ) | ದಕ್ಷಿಣ ಭಾರತದ ಅತ್ಯಂತ ಪ್ರತಿಷ್ಠಿತ ಸರ್ಕಾರಿ ಕ್ಯಾನ್ಸರ್ ಆಸ್ಪತ್ರೆಯಾದ ಕಿದ್ವಾಯಿ ಸ್ಮಾರಕ ಗ್ರಂಥಿ ಆಸ್ಪತ್ರೆಯಲ್ಲಿ ಸಾವುಗಳು ಹೆಚ್ಚುತ್ತಿರಲು ಕಾರಣವೇನು? | ಕಿದ್ವಾಯಿ ಸ್ಮಾರಕ ಗ್ರಂಥಿ ಆಸ್ಪತ್ರೆಯಲ್ಲಿ ಪ್ರತಿ ವರ್ಷವೂ ಒಳರೋಗಿಗಳ ಸಂಖ್ಯೆಯು ಹೆಚ್ಚಾಗುತ್ತಿರುವುದರಿಂದ, ರೋಗಿಗಳ ಮರಣದ ಸಂಖ್ಯೆಯೂ ಹೆಚ್ಚಳವಾಗಿದೆ.<br><br>ವರ್ಷಕ್ಕೆ ಅಂದಾಜು ಪ್ರತಿಶತ 15.4% ಕ್ಯಾನ್ಸರ್ ರೋಗಿಗಳು ಇತರೆ ಕ್ಯಾನ್ಸರ್ ಚಿಕಿತ್ಸಾ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆದ ನಂತರ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ಚಿಕಿತ್ಸೆ ಪಡೆಯಲು ನೋಂದಣಿಯಾಗುತ್ತಿರುವುದು ಕಂಡು ಬಂದಿದೆ.<br><br>ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ತೃತೀಯ ಹಂತದ ಕ್ಯಾನ್ಸರ್ ಆರೈಕೆ ಕೇಂದ್ರವಾಗಿರುವುದರಿಂದ, ಕಳೆದ 5 ವರ್ಷಗಳಿಂದ |

| | | |
|---|---|---|
| | | ಚಿಕಿತ್ಸೆ ಪಡೆದಿರುವ ರೋಗಿಗಳ ಪೈಕಿ ಸುಮಾರು ಶೇ.14ರಷ್ಟು ಹೊಸರೋಗಿಗಳು ಉಪಶಾಮಕ (Palliative and Symptomatic) ಆರೈಕೆಯನ್ನೂ ಸಹ ಪ್ರತಿವರ್ಷ ಪಡೆದಿರುತ್ತಾರೆ. ಈ ಮೇಲಿನ ಅಂಶಗಳಿಂದ ಮರಣ ಸಂಭವಿಸುತ್ತಿದೆ. |
| (ಉ) | ಆಸ್ಪತ್ರೆಯ ಆಡಳಿತಾಧಿಕಾರಿಗಳು ತಿಳಿಸಿರುವಂತೆ ರೋಗಿಗಳು ಕ್ಯಾನ್ಸರ್ ಕಾಯಿಲೆಯ ಬಗ್ಗೆ ಅರಿವಿಲ್ಲದ್ದರಿಂದ 3ನೇ ಮತ್ತು 4ನೇ ಹಂತಕ್ಕೆ ಬಂದ ನಂತರದೇ ಕಿದ್ವಾಯಿ ಆಸ್ಪತ್ರೆಗೆ ದಾಖಲಾಗುತ್ತಿರುವುದರಿಂದ ಕೊನೆಯ ಹಂತದಲ್ಲಿ ಚಿಕಿತ್ಸೆ ಫಲಕಾರಿ ಆಗದಿರುವುದರಿಂದ ಸಾವುಗಳು ಹೆಚ್ಚುತ್ತಿವೆ ಎಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು; | ಬಂದಿರುವುದಿಲ್ಲ. |
| (ಊ) | ರಾಜ್ಯದಲ್ಲಿ ಹೊಸದಾಗಿ ಮಂಜೂರಾಗಿರುವ ಕ್ಯಾನ್ಸರ್ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅವು ಯಾವುವು; | ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಮೇಲ್ವಿಚಾರಣೆಯೊಂದಿಗೆ ರಾಜ್ಯದಲ್ಲಿ ಹೊಸದಾಗಿ 4 ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಅವು ಈ ಕೆಳಕಂಡಂತಿವೆ.<br><br>1) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ತುಮಕೂರು<br>2) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಶಿವಮೊಗ್ಗ<br>3) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಮೈಸೂರು<br>4) ಪ್ರಾದೇಶಿಕ ಕ್ಯಾನ್ಸರ್ ಕೇಂದ್ರ, ಬೆಳಗಾವಿ |
| (ಋ) | ಸರ್ಕಾರವು ಹೆಚ್.ಐ.ವಿ ಕುಷ್ಟರೋಗ, ಕ್ಷಯ ರೋಗಗಳನ್ನು ನಿಯಂತ್ರಿಸಲು ಮತ್ತು ಅರಿವು ಮೂಡಿಸಲು ಪ್ರತ್ಯೇಕ ಶೆಲ್‌ಗಳನ್ನು ಸ್ಥಾಪಿಸಿದ್ದು ಅದೇ ರೀತಿ ಕ್ಯಾನ್ಸರ್ ರೋಗದ ಬಗ್ಗೆ ನಿಯಂತ್ರಣ ಮತ್ತು ಅರಿವು ಮೂಡಿಸಲು ಪ್ರತ್ಯೇಕ ಶೆಲ್ ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ? | ಕ್ಯಾನ್ಸರ್ ರೋಗದ ಬಗ್ಗೆ ನಿಯಂತ್ರಣ ಮತ್ತು ಅರಿವು ಮೂಡಿಸಲು ಪ್ರತ್ಯೇಕ ಶೆಲ್ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |

**ಸಂಖ್ಯೆ:** ಎಂಇಡಿ 37 ಕೆಯುಎಂ 2024

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.